# ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ

**"ಅಭಿವೃದ್ಧಿ ಭವನ"** ಐವಾನ-ಎ-ಶಾಹಿ, ಕಲಬುರಗಿ-585102

ದೂರವಾಣಿ: (08472) - 256767,239556,255564, ಫ್ಯಾಕ್ಸ್ : (08472) 227527

Email: hkadbgulb@gmail.com Website: hkrdb.kar.nic.in


ಸಂಖ್ಯೆ:ಕಕಪ್ರಅಮಂ/ಯೋಶಾ/ಸನಿ/2022-23/503 ದಿನಾಂಕ: 13.04.2023

## :: ಸುತ್ತೋಲೆ ::

ವಿಷಯಃ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಮಂಜೂರಾದ ಕಾಮಗಾರಿಗಳು/ ಪೀಠೋಪಕರಣಗಳು/ವಾಹನಗಳಿಗೆ ನಾಮಫಲಕ ಹಾಗೂ ಮಂಡಳಿಯ ಲೋಗೋ ನಮೂದಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಮಂಜೂರಾತಿ ನೀಡಿ, ಪೂರ್ಣಗೊಂಡಿರುವ ಕಾಮಗಾರಿಗಳ ಸ್ಥಳದಲ್ಲಿ ಮಂಡಳಿಯ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕಾಗಿರುತ್ತದೆ. ಸದರಿ ನಾಮಫಲಕಗಳನ್ನು ಅಳವಡಿಸುವಂತೆ ಸಂಬಂಧಪಟ್ಟ ಅನುಷ್ಠಾನ ಇಲಾಖೆಯವರು ಕ್ರಮಕೈಗೊಳ್ಳಬೇಕಾಗಿರುತ್ತದೆ. ಮುಂದುವರೆದು ಮಂಜೂರಾತಿ ನೀಡಿದ ಪೀಠೋಪಕರಣಗಳಿಗೆ ಸಂಬಂಧಿಸಿದಂತೆ, ಪೀಠೋಪಕರಣಗಳ ಮೇಲೆ ಮಂಡಳಿಯ ಹೆಸರನ್ನು ನಮೂದಿಸಬೇಕಾಗಿರುತ್ತದೆ. ಇನ್ನಿತರೆ ಇಲಾಖೆಗಳಾದ ಪೋಲಿಸ್ ಇಲಾಖೆ, ಸಾರಿಗೆ ಇಲಾಖೆ ಮತ್ತು ಆರೋಗ್ಯ ಇಲಾಖೆಗಳಿಗೆ ಸಂಬಂಧಿಸಿದಂತೆ ಮಂಡಳಿಯಿಂದ ವಾಹನಗಳನ್ನು ಒದಗಿಸಲಾಗುತ್ತಿದ್ದು, ವಾಹನಗಳಿಗೆ ಮಂಡಳಿಯ ನಾಮಫಲಕ ಹಾಗೂ ಲೋಗೋ ಹಾಕದೇ ಇರುವುದು ಕಂಡುಬಂದಿರುತ್ತದೆ.

ಪ್ರಯುಕ್ತ ಮಂಡಳಿಯಿಂದ ಮಂಜೂರಾತಿ ನೀಡಿದ ಪ್ರತಿಯೊಂದು ಸಿವಿಲ್ ಕಾಮಗಾರಿಗಳಿಗೆ ನಾಮಫಲಕಗಳನ್ನು, ಪಿಠೋಪಕರಣಗಳಿಗೆ ಮಂಡಳಿಯ ಹೆಸರನ್ನು ಮತ್ತು ವಾಹನಗಳಿಗೆ ಮಂಡಳಿಯ ಲೋಗೋವನ್ನು ಕಡ್ಡಾಯವಾಗಿ ನಮೂದಿಸುವುದು. ಇಲ್ಲವಾದಲ್ಲಿ ಮಂಡಳಿಯಿಂದ ಅಂತಿಮ ಕಂತಿನ ಬಿಲ್ಲುಗಳನ್ನು ಬಿಡುಗಡೆ ಮಾಡಲಾಗುವುದಿಲ್ಲವೆಂದು ಈ ಮೂಲಕ ತಿಳಿಸಿದೆ.

ತಮ್ಮ ವಿಶ್ವಾಸಿ,

ಕಾರ್ಯದರ್ಶಿಗಳು,
ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ
ಮಂಡಳಿ, ಕಲಬುರಗಿ

**ಪ್ರತಿಯನ್ನು:**

1. ಜಿಲ್ಲಾಧಿಕಾರಿಗಳು, ಬೀದರ/ಕಲಬುರಗಿ/ಯಾದಗಿರಿ/ರಾಯಚೂರು/ಕೊಪ್ಪಳ/ಬಳ್ಳಾರಿ/ವಿಜಯನಗರ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ/ಕಲಬುರಗಿ/ಯಾದಗಿರಿ/ ರಾಯಚೂರು/ಕೊಪ್ಪಳ/ಬಳ್ಳಾರಿ/ವಿಜಯನಗರ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಪೋಲಿಸ್ ಅಧಿಕ್ಷಕರು, ಬೀದರ/ಕಲಬುರಗಿ/ಯಾದಗಿರಿ/ರಾಯಚೂರು/ಕೊಪ್ಪಳ/ಬಳ್ಳಾರಿ/ವಿಜಯನಗರ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಆಯುಕ್ತರು, ಮಹಾನಗರ ಪಾಲಿಕೆ, ಕಲಬುರಗಿ ಹಾಗೂ ಬಳ್ಳಾರಿ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ ಕಲಬುರಗಿ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6. ವ್ಯವಸ್ಥಾಪಕ ನಿರ್ದೇಶಕರು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಕಲಬುರಗಿ ವಿಭಾಗ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ಮುಖ್ಯ ಇಂಜಿನೀಯರರು, ಸಂಪರ್ಕ ಮತ್ತು ಕಟ್ಟಡಗಳು (ಈಶಾನ್ಯ), ಲೋಕೋಪಯೋಗಿ ಇಲಾಖೆ, ಕಲಬುರಗಿ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8. ಅಧೀಕ್ಷಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಕಲಬುರಗಿ ಹಾಗೂ ಬಳ್ಳಾರಿ ವೃತ್ತ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
9. ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆ, ಕಲಬುರಗಿ ಹಾಗೂ ಬಳ್ಳಾರಿ ವೃತ್ತ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

10. ಅಧೀಕ್ಷಕ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಕಲಬುರಗಿ ವೃತ್ತ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
11. ಅಧೀಕ್ಷಕ ಅಭಿಯಂತರರು, ಸಣ್ಣ ನೀರಾವರಿ ಇಲಾಖೆ, ಕಲಬುರಗಿ ವೃತ್ತ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
12. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಬೀದರ/ಕಲಬುರಗಿ/ಯಾದಗಿರಿ/ರಾಯಚೂರು/ಕೊಪ್ಪಳ/ ಬಳ್ಳಾರಿ/ ವಿಜಯನಗರ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
13. ಮಂಡಳಿಯ ವ್ಯಾಪ್ತಿಯ ಎಲ್ಲಾ ಅನುಷ್ಠಾನಾಧಿಕಾರಿಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.